**Bangalore**
**Regional News**
**04.06.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು :**

**1.** ಸಂಪುಟದ ಸಚಿವರು, ಹಿರಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಭೆ; ಆಡಳಿತಕ್ಕೆ ಚುರುಕು ಮುಟ್ಟಿಸುವಂತೆ ಸೂಚನೆ

**2.** ಜಿಲ್ಲೆ ಅಭಿವೃದ್ಧಿಯಾದರೆ ರಾಜ್ಯ, ದೇಶ ಅಭಿವೃದ್ಧಿಯಾದಂತೆ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅಭಿಮತ

**3.** ಖಾತೆ ಹಂಚಿಕೆ ಪ್ರಕ್ರಿಯೆ ಸಂಜೆಯೊಳಗೆ ಅಂತಿಮಗೊಳ್ಳುವ ಸಾಧ್ಯತೆ - ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟನೆ

**4.** ಪಕ್ಷ ಬಲಪಡಿಸಲು ಕೈಜೋಡಿಸುವಂತೆ ಕಾರ್ಯಕರ್ತರಿಗೆ ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಕರೆ

**5.** ನೈಋತ್ಯ ಮುಂಗಾರು ಇಂದು ಕೇರಳಂ ಪ್ರವೇಶಿಸುವ ಸಾಧ್ಯತೆ; ಕರಾವಳಿ ಕರ್ನಾಟಕದಲ್ಲಿ ಗುಡುಗು ಸಹಿತ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

*********

ಆಡಳಿತಕ್ಕೆ ಚುರುಕು ಮುಟ್ಟಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವಿಧಾನಸೌಧದಲ್ಲಿಂದು ನಡೆದ ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ೧೫ ದಿನಗಳೊಳಗೆ ಕಾರ್ಯ ಯೋಜನೆ ನೀಡುವಂತೆ ಸೂಚನೆ ನೀಡಿದ್ದಾರೆ. ಯಾರ ಒತ್ತಡಕ್ಕೂ ಮಣಿಯದೆ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಸಭೆಯಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವರಾದ ರಾಮಲಿಂಗಾರೆಡ್ಡಿ, ಈಶ್ವರ್ ಖಂಡ್ರೆ, ಯು.ಟಿ. ಖಾದರ್ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಉಪಸ್ಥಿತರಿದ್ದರು. ಸಭೆಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

*********

ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಬಡೇಪಲ್ಲಿ ಗ್ರಾಮದಲ್ಲಿ ರೈತರ ತರಬೇತಿ ಹಾಗೂ ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಕೇಂದ್ರವನ್ನು ಮಹಿಳೆಯರೇ ಮುನ್ನಡೆಸುತ್ತಿರುವುದು ಶ್ಲಾಘನೀಯ ಎಂದು ತಿಳಿಸಿದರು. ಇದೇ ವೇಳೆ ಯಾದಗಿರಿ ಜಿಲ್ಲೆ ಅಭಿವೃದ್ಧಿಯಲ್ಲಿ ಹಿಂದುಳಿದಿರುವ ಬಗ್ಗೆ ಅವರು ಕಳವಳ ವ್ಯಕ್ತಪಡಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬಂದ ಬಳಿಕ, ಪ್ರತಿಯೊಂದು ಜಿಲ್ಲೆಯ ಅಭಿವೃದ್ಧಿಗೂ ಪಣತೊಟ್ಟಿದ್ದು, ಪ್ರತಿಯೊಬ್ಬ ವ್ಯಕ್ತಿಯೂ ಬಡತನದಿಂದ ಮುಕ್ತವಾಗಲು ಶ್ರಮಿಸಲಾಗುತ್ತಿದೆ ಎಂದು ಹೇಳಿದರು. ನಬಾರ್ಡ್ ನೆರವಿನೊಂದಿಗೆ ಈ ರೈತ ತರಬೇತಿ ಹಾಗೂ ಸಾಮಾನ್ಯ ಸೌಲಭ್ಯ ತರಬೇತಿ ಕೇಂದ್ರವನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಹೇಳಿದ್ದಾರೆ. ಇಲ್ಲಿ ತಯಾರಾಗುವ ಉತ್ಪನ್ನಗಳನ್ನು ಇ-ಕಾಮರ್ಸ್‌ಗೆ ಪರಿಚಯಿಸುವಂತೆ ನಬಾರ್ಡ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಒಂದು ಜಿಲ್ಲೆ ಅಭಿವೃದ್ಧಿಯಾದರೆ, ರಾಜ್ಯ ಹಾಗೂ ದೇಶ ಅಭಿವೃದ್ಧಿಯಾದಂತೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಅಭಿಪ್ರಾಯಪಟ್ಟಿದ್ದಾರೆ.

*********

ಖಾತೆ ಹಂಚಿಕೆ ಪ್ರಕ್ರಿಯೆ ಸಂಜೆಯೊಳಗೆ ಅಂತಿಮಗೊಳ್ಳುವ ಸಾಧ್ಯತೆ ಇದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈವರೆಗೆ ಖಾತೆಗಳನ್ನು  ಹಂಚಿಕೆ ಮಾಡಿಲ್ಲ, ಮಾಧ್ಯಮ ವರದಿಗಳು ಕೇವಲ ಊಹಾಪೋಹ ಎಂದು ತಿಳಿಸಿದ್ದಾರೆ. ಸಾರ್ವಜನಿಕ ಕಚೇರಿಯಲ್ಲಿ ಜವಾಬ್ದಾರಿಯ ಮಹತ್ವವನ್ನು ಒತ್ತಿ ಹೇಳಿದ ಪ್ರಿಯಾಂಕ್ ಖರ್ಗೆ, ಪ್ರತಿಯೊಬ್ಬ ನಾಯಕರು ನೀಡಲಾದ ಹುದ್ದೆಯನ್ನು ಜನರಿಗೆ ಸೇವೆ ಸಲ್ಲಿಸುವ ಅವಕಾಶವೆಂದು ಪರಿಗಣಿಸಬೇಕು ಎಂದು ಹೇಳಿದ್ದಾರೆ. ಇದೇ ವೇಳೆ ಪಕ್ಷದೊಳಗಿನ ಆಂತರಿಕ ಗೊಂದಲಗಳ ವರದಿಯನ್ನು ಪ್ರಿಯಾಂಕ್ ಖರ್ಗೆ ತಳ್ಳಿಹಾಕಿದ್ದಾರೆ.

*********

ಪಕ್ಷ ಸಂಘಟಿಸಲು ಹಾಗೂ ಪಕ್ಷವನ್ನು ಬಲಪಡಿಸಲು ಕೈಜೋಡಿಸುವಂತೆ ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸ್ಥಾನ ಸಿಗದೆ, ಅಸಮಾಧಾನಗೊಂಡಿರುವ ನಾಯಕರಿಗೆ ಪಕ್ಷದ ಸಂಘಟನೆಗೆ ಒತ್ತು ನೀಡುವಂತೆ ಸಲಹೆ ನೀಡಿದ್ದಾರೆ. ಸಂಘಟನೆ ಮತ್ತು ಸರ್ಕಾರ ಎರಡನ್ನು ಸಮತೋಲನವಾಗಿ ಹಂಚಿಕೊಂಡು ಕಾರ್ಯ ನಿರ್ವಹಿಸುವಂತೆ ತಿಳಿಸಿದ್ದಾರೆ. ಸಾಮಾನ್ಯ ಕಾರ್ಯಕರ್ತರಿಗೆ ಏನೇ ತೊಂದರೆಯಾದರೂ ಸದಾ ಜೊತೆಗಿರುವುದಾಗಿ ಭರವಸೆ ನೀಡಿದ್ದಾರೆ.

*********

ಕೇರಳಂ ನೂತನ ಮುಖ್ಯಮಂತ್ರಿ ರಾಜ್ಯದ ಆರ್ಥಿಕ ಸ್ಥಿತಿಗತಿಯ ನೈಜ ಚಿತ್ರಣವನ್ನು ಜನರ ಮುಂದಿಡುವ ಉದ್ದೇಶದಿಂದ ಹಣಕಾಸು ಶ್ವೇತಪತ್ರ ಮಂಡಿಸಿರುವುದು ಸ್ವಾಗತಾರ್ಹವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಅದೇ ಮಾದರಿಯಲ್ಲಿ ರಾಜ್ಯದಲ್ಲಿ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದ ಹಣಕಾಸಿನ ಸ್ಥಿತಿಗತಿಯ ಕುರಿತು ಶ್ವೇತಪತ್ರ ಮಂಡಿಸಬೇಕು ಎಂದು ಆಗ್ರಹಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯದ ಸಾಲ ಎಷ್ಟು ಹೆಚ್ಚಾಗಿದೆ. ಸರ್ಕಾರದ ಖಜಾನೆಯ ನಿಜವಾದ ಸ್ಥಿತಿಗತಿ ಏನು ಹಾಗೂ ಮುಂದಿನ ಪೀಳಿಗೆಯ ಮೇಲೆ ಎಷ್ಟು ಹೊರೆ ಹಾಕಲಾಗಿದೆ ಎಂದು ಪ್ರಶ್ನಿಸಿದ್ದಾರೆ.

*********

ನೈಋತ್ಯ ಮುಂಗಾರು ಇಂದು ಕೇರಳಂ ತಲುಪಲಿದೆ. ಈ ಹಿನ್ನೆಲೆಯಲ್ಲಿ ಕೇರಳಂ, ಕರಾವಳಿ, ಕರ್ನಾಟಕ ಸೇರಿದಂತೆ ಹಲವೆಡೆ ವ್ಯಾಪಕ ಮಳೆಯಾಗಲಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂಬರುವ ದಿನಗಳಲ್ಲಿ ಕರಾವಳಿ ಕರ್ನಾಟಕದಲ್ಲಿ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆ ಇದೆ. ಮುಂಗಾರು ಆಗಮನವು ಭಾರತದ ವಾರ್ಷಿಕ ನಾಲ್ಕು ತಿಂಗಳ ಮಳೆಗಾಲದ ಆರಂಭವನ್ನು ಸೂಚಿಸುತ್ತದೆ. ಮುಂಗಾರು ಆಗಮನದಿಂದಾಗಿ ದೇಶದಲ್ಲಿ ಕೃಷಿ ಚಟುವಟಿಕೆ ಆರಂಭಗೊಳ್ಳುವ ಮುನ್ಸೂಚನೆ ದೊರೆತಿದೆ.

*********

ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆಯಿಂದ ಹಾನಿಯುಂಟಾಗುವ ಪ್ರದೇಶಗಳ ಬಗ್ಗೆ ಸಮೀಕ್ಷೆ ನಡೆಸಲಾಗಿದ್ದು ಜಿಲ್ಲೆಯಲ್ಲಿ ಒಟ್ಟು ೧೬೪ ಸೂಕ್ಷ್ಮ ದುರ್ಬಲ ಪ್ರದೇಶಗಳು ಎಂದು ಗುರುತಿಸಲಾಗಿದೆ ಎಂದು ಜಿಲ್ಲಾಧಿಕಾರಿ ಭನ್ವರ್ ಸಿಂಗ್ ಮೀನಾ ತಿಳಿಸಿದ್ದಾರೆ. ಮುಂಗಾರು ಮಳೆ ಆರಂಭಕ್ಕೂ ಮುನ್ನ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಪಾಯದಲ್ಲಿರುವ ತಗ್ಗು ಪ್ರದೇಶಗಳಲ್ಲಿರುವ ಮನೆಗಳಲ್ಲಿ ವಾಸಿಸುವವರ ಸ್ಥಳಾಂತರಕ್ಕೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಜಿಲ್ಲೆಯ ಎಲ್ಲಾ ತಾಲೂಕು ಕೆಂದ್ರಗಳಲ್ಲಿ ಮಳೆ ಹಾನಿಯ ಕಂಟ್ರೋಲ್ ರೂಂಗಳನ್ನು ತೆರೆಯಲಾಗಿದ್ದು ಮಳೆಯಿಂದ ಹಾನಿಯುಂಟಾದರೆ ಸಹಾಯಕ್ಕೆ ಧಾವಿಸಲು ಸಿಬ್ಬಂದಿ ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಇಲ್ಲಿವರೆಗೆ ಸುರಿದ ಮಳೆಗೆ ಜಿಲ್ಲೆಯಲ್ಲಿ ೧ ಮನೆ ಸಂಪೂರ್ಣ ಹಾನಿಯಾಗಿದ್ದು, ೫೧ ಮನೆಗಳಿಗೆ ಭಾಗಶ ಹಾನಿಯಾಗಿದೆ. ಒಂದು ಸಾವಿರದ ೮೭೦ ವಿದ್ಯುತ್ ಕಂಬಗಳು ಬಿದ್ದಿವೆ ಎಂದು ತಿಳಿಸಿದ್ದಾರೆ.

*********

ಭಾರತೀಯ ಹವಾಮಾನ ಇಲಾಖೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಇಂದು ಮತ್ತು ನಾಳೆವರೆಗೆ ಮಧ್ಯಮ ಮಳೆ ಹಾಗೂ ಇದೇ ೭ ರಿಂದ ೧೦ ರ ವರೆಗೆ ಭಾರಿ ಮಳೆಯಾಗುವ ಸಾಧ್ಯತೆದೆ ಎಂದು ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ಮತ್ತು ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಜಿಲ್ಲಾಡಳಿತ ಮುಂಗಾರು ಪೂರ್ವದ ಸಿದ್ಧತೆ ಮಾಡಿಕೊಂಡಿದ್ದು, ಜಿಲ್ಲೆಯಲ್ಲಿ ೨೯೪ ಕಾಳಜಿ ಕೇಂದ್ರಗಳನ್ನು ಗುರುತಿಸಲಾಗಿದೆ. ಪ್ರತಿ ಕಾಳಜಿ ಕೇಂದ್ರಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಹೇಳಿದ್ದಾರೆ. ಭಾರತೀಯ ಭೂ ವಿಜ್ಞಾನ ಸರ್ವೇಕ್ಷಣಾ ಇಲಾಖೆ, ಜಿಲ್ಲೆಯಲ್ಲಿ ೪೩೯ ಭೂಕುಸಿತ ಸಂಭವನೀಯ ಸ್ಥಳಗಳ ಪಟ್ಟಿ ನೀಡಿದೆ ಎಂದು ತಿಳಿಸಿದ್ದಾರೆ. ಸಾರ್ವಜನಿಕರು ಯಾವುದೇ ತುರ್ತು ಸಂದರ್ಭಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ವಿಪತ್ತು ನಿರ್ವಹಣಾ ಕೇಂದ್ರದ ಕಂಟ್ರೋಲ್ ರೂಂಗೆ ದೂರವಾಣಿ ಕರೆ ಮಾಡಿ, ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*********

ಹಾವೇರಿ ಜಿಲ್ಲೆಯಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಇದೇ ೩೦ ರಿಂದ ಪ್ರಾರಂಭವಾಗಲಿದ್ದು, ಪರಿಷ್ಕರಣೆಗೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಈಗಾಗಲೇ ೨೦೦೨ರ ಮತದಾರರ ಪಟ್ಟಿ ಜೊತೆಗೆ ಮ್ಯಾಪಿಂಗ್ ನಡೆಸಲಾಗಿದೆ. ಯಾವುದೇ ಗೊಂದಲವಿಲ್ಲದೆ ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳ ಸಹಕಾರದಿಂದ ಯಶಸ್ವಿಯಾಗಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

*********

ಚಾಮರಾಜನಗರ ತಾಲೂಕಿನ ಹೊನ್ನಹಳ್ಳಿ ಗ್ರಾಮದಲ್ಲಿ ಜಾನುವಾರುಗಳ ಮೇಲೆ ದಾಳಿ ಮಾಡಿ ರೈತರಿಗೆ ಆತಂಕ ಹುಟ್ಟಿಸಿದ್ದ ಚಿರತೆ ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ. ಕಳೆದ ಹಲವು ದಿನಗಳಿಂದ ಜಾನುವಾರುಗಳ ಮೇಲೆ ದಾಳಿ ಮಾಡುತ್ತಿದ್ದರಿಂದ ಬಿಳಿಗಿರಿರಂಗನಾಥ ದೇವಾಲಯದ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಅರಣ್ಯ ಸಿಬ್ಬಂದಿ ಆಯಕಟ್ಟಿನ ಸ್ಥಳಗಳಲ್ಲಿ ಬೋನುಗಳಲ್ಲಿ ಇಟ್ಟಿದ್ದರು. ಆಹಾರ ಅರಸಿ ಬಂದ ಚಿರತೆ ಸೆರೆಯಾಗಿದ್ದು, ದಟ್ಟಾರಣ್ಯಕ್ಕೆ ಬಿಡಲಾಗುವುದು ಎಂದು ಅರಣ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

*********

ಶೈಕ್ಷಣಿಕ ಸಂಸ್ಥೆಗಳ ಅಕ್ಕಪಕ್ಕದಲ್ಲಿ ನೂರು ಗಜಗಳ ಒಳಗೆ ತಂಬಾಕು ಮಾರಾಟ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳುವಂತೆ ಹಾಗೂ ಕೋಟ್ಪಾ ಕಾಯಿದೆಯಲ್ಲಿನ ಸೂಚನೆಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ನಿರ್ದೇಶನ ನೀಡಿದ್ದಾರೆ. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ತಂಬಾಕು ಬಳಕೆಯನ್ನು ಸಂಪೂರ್ಣವಾಗಿ ನಿಯಂತ್ರಿಸಿ, ತಂಬಾಕು ಮುಕ್ತ ಶಾಲೆ, ಕಾಲೇಜು ಘೋಷಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

*********

೧. ದಾವಣಗೆರೆ ನಗರದಲ್ಲಿ ಸ್ವಚ್ಛತೆ ಮತ್ತು ಸಾರ್ವಜನಿಕ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಮಹಾನಗರ ಪಾಲಿಕೆಯ ಆರೋಗ್ಯ ಶಾಖೆಯು ಕ್ರಮ ಕೈಗೊಂಡಿದ್ದು, ನಿಯಮ ಉಲ್ಲಂಘಿಸಿದವರಿಂದ ಸ್ಥಳದಲ್ಲಿಯೇ ೯೨ ಸಾವಿರ ರೂಪಾಯಿಗೂ ಅಧಿಕ ದಂಡ ವಸೂಲಿ ಮಾಡಲಾಗಿದೆ ಎಂದು ಪಾಲಿಕೆ ಆಯುಕ್ತ ಡಾ.ಮಹಾಂತೇಶ್ ತಿಳಿಸಿದ್ದಾರೆ.

೨. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಆಚರಿಸಲಾಯಿತು.

****END*****